ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯ ಕರ್ನಾಟಕ    ದಿನಾಂಕ : DATE : 14/07/2019


# ಶಾಸಕರ ರಾಜೀನಾಮೆ ತಿರಸ್ಕರಿಸಿದ ಇತಿಹಾಸ ಇಲ್ಲ

ಬೆಂಗಳೂರು: ರಾಜ್ಯ ವಿಧಾನಸಭೆಯ ಇತಿಹಾಸದಲ್ಲಿ ಶಾಸಕರು ಸಲ್ಲಿಸಿದ ರಾಜೀನಾಮೆ ಪತ್ರಗಳನ್ನು ತಿರಸ್ಕರಿಸಿದ ಇತಿಹಾಸ ಇಲ್ಲ.

ಶಾಸಕರು ಸ್ಪೀಕರ್ ಅವರನ್ನು ಖುದ್ದಾಗಿ ಭೇಟಿಯಾಗಿ ನಿಗದಿತ ನಮೂನೆಯಲ್ಲಿ ರಾಜೀನಾಮೆ ಸಲ್ಲಿಸಿದರೆ ತಕ್ಷಣ ಅಂಗೀಕರಿಸಬೇಕು. ಒಂದು ವೇಳೆ ಸ್ಪೀಕರ್ ಗೈರು ಹಾಜರಿಯಲ್ಲಿ ಶಾಸಕರು ಸ್ಪೀಕರ್ ಆಪ್ತ ಕಾರ್ಯದರ್ಶಿ ಇಲ್ಲವೇ ವಿಧಾನಸಭೆ ಕಾರ್ಯದರ್ಶಿಗೆ, ಅಂಚೆ/ಇಮೇಲ್ ಮೂಲಕ ರಾಜೀನಾಮೆ ಸಲ್ಲಿಸಿದ ಸಂದರ್ಭದಲ್ಲಿ ಅಂಥ ಶಾಸಕರನ್ನು ಸ್ಪೀಕರ್ ಖುದ್ದಾಗಿ ಕರೆಸಿ ರಾಜೀನಾಮೆ ಪತ್ರ ನೈಜತೆಯಿಂದ ಕೂಡಿದೆಯೇ ಎಂಬುದನ್ನು ಪರಿಶೀಲಿಸಿ ಅಂಗೀಕರಿಸಬೇಕು. ಆದರೆ ರಾಜೀನಾಮೆ ಸಲ್ಲಿಸಿದ ಶಾಸಕರ ಬಗ್ಗೆ ಸಂಘ ಸಂಸ್ಥೆಗಳು, ಮತದಾರರು ಸಲ್ಲಿಸಿದ ಆಹವಾಲುಗಳ ವಿಚಾರಣೆ ನಡೆಸಲು ಅವಕಾಶವಿಲ್ಲ.

ಆದರೆ ಚಿಂಚೋಳಿ ಶಾಸಕರಾಗಿದ್ದ ಡಾ.ಉಮೇಶ್ ಜಾಧವ್ ರಾಜೀನಾಮೆ ಪ್ರಕರಣದಲ್ಲಿ ಸ್ಪೀಕರ್ ರಮೇಶ್ ಕುಮಾರ್ ಅವರು ಸಾರ್ವಜನಿಕ ದೂರುಗಳ ವಿಚಾರಣೆ ಬಳಿಕ ಜಾಧವ್ ರಾಜೀನಾಮೆ ಅಂಗೀಕರಿಸಿದ್ದರು.

ವಿಧಾನಸಭೆಯ ಇತಿಹಾಸದಲ್ಲಿ ರಾಜೀನಾಮೆ ಸಲ್ಲಿಸಿದ ಶಾಸಕರ ಪತ್ರಗಳನ್ನು ತಿರಸ್ಕರಿಸಿದ ಉದಾಹರಣೆಗಳಿಲ್ಲ. ಶಾಸಕರೇ ಸ್ವಯಂ ಪ್ರೇರಣೆಯಿಂದ ಶಾಸಕ ಸ್ಥಾನ ತ್ಯಜಿಸಲು ಮುಂದೆ ಬಂದಾಗ ಸ್ಪೀಕರ್ ಅವರ ರಾಜೀನಾಮೆ ಪತ್ರಗಳನ್ನು ತಿರಸ್ಕರಿಸಿದರೆ ಅದಕ್ಕೆ ಅನೇಕ ರೀತಿಯ ರಾಜಕೀಯ ವ್ಯಾಖ್ಯಾನಗಳು ಉಂಟಾಗುತ್ತವೆ